ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ಕೈಗಾರಿಕೆಗಳಲ್ಲಿ ಉದ್ಯೋಗದ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :-

1001(1038) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳನ್ನು ಸ್ಥಾಪಿಸುವ ಸಂದರ್ಭದಲ್ಲಿ 75% ಉದ್ಯೋಗವನ್ನು ಸ್ಥಳೀಯ ಕನ್ನಡಿಗರಿಗೆ ನೀಡುವ ಬಗ್ಗೆ ಸರ್ಕಾರದ ನಿಲುವೇನು ; ಸ್ಥಳೀಯರಿಗೆ ಉದ್ಯೋಗ ಎಂಬುದರ ಕುರಿತು ಕಾನೂನು ಜಾರಿಗೆ ತರುವ ಪ್ರಸ್ತಾವದ ಕುರಿತು ಸರ್ಕಾರದ ನಿಲುವೇನು ;

(ಆ) ಕನ್ನಡ ನಾಡಿನ ಭೂಮಿ, ನೀರು, ಮೂಲಭೂತ ಸೌಕರ್ಯಗಳನ್ನು ಬಳಸುತ್ತಿರುವ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳು ಸ್ಥಳೀಯ ಕನ್ನಡಿಗರಿಗೆ ಉದ್ಯೋಗ ನಿರಾಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಉದ್ಯೋಗ ನೀಡದಿರುವ ಕೈಗಾರಿಕೆಗಳ ಮೇಲೆ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ;

(ಇ) ಕಳೆದ 2 ವರ್ಷಗಳಲ್ಲಿ ರಾಜ್ಯದಲ್ಲಿ ಎಷ್ಟು ಬೃಹತ್ ಕೈಗಾರಿಕೆಗಳು ಸ್ಥಾಪನೆಯಾಗಿವೆ ; ಎಷ್ಟು ಸ್ಥಳೀಯರಿಗೆ ಉದ್ಯೋಗ ದೊರತಿದೆ? (ಜಿಲ್ಲಾವಾರು ಮಾಹಿತಿ ನೀಡುವುದು)